**ಸಿವಿಲ್ ಜಡ್ಜ್ ಹಾಗೂ ಪ್ರ.ದ.ನ್ಯಾ.ದಃ ನ್ಯಾಯಾಲಯಃ ಶೃಂಗೇರಿ**

**ಸಿ.ಸಿ ಸಂಖ್ಯೆ :: 12/2026**

| | | | |
|---|---|---|---|
| **ಸಾಕ್ಷಿದಾರರ ಹೆಸರು** | : | ಸುರೇಶ | **PW**-2 |
| **ತಂದೆಯ ಹೆಸರು** | : | ಸಂಜೀವ | **CW**-2 |
| **ವಯಸ್ಸು** | : | 57 ವರ್ಷ | |
| **ಉದ್ಯೋಗ** | : | ಆಟೋ ಡ್ರೈವರ್ | |
| **ವಾಸಸ್ಥಳ** | : | ಶಂಕರಾಪುರ | |

**ದಿನಾಂಕಃ07-05-2026 ರಂದು ಪ್ರಮಾಣವಚನ ಬೋಧಿಸಲಾಯಿತು.**

1. ನನಗೆ ಈ ಪ್ರಕರಣದಲ್ಲಿ ಯಾವುದೇ ವಿಚಾರ ತಿಳಿದಿರುವುದಿಲ್ಲ. ನಾನು ಈ ಪ್ರಕರಣದಲ್ಲಿ ಪೋಲಿಸರಿಗೆ ಯಾವುದೇ ಹೇಳಿಕೆ ನೀಡಿರುವುದಿಲ್ಲ. ಸಾಕ್ಷಿಗೆ ಒಂದು ದಾಖಲೆಯನ್ನು ತೋರಿಸಿ ಕೇಳಲಾಗಿ ಸಾಕ್ಷಿಯು ಸದರಿ ದಾಖಲೆಯಲ್ಲಿಇರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ಈಗಾಗಲೇ ಸ್ಥಳ ಮಹಜರ್ ಎಂದು ನಿಶಾನೆ ಪಿ 2 ಎಂದು ಗುರುತಿಸಲಾಗಿರುತ್ತದೆ. ಅದರಲ್ಲಿರುವ ತನ್ನ ಸಹಿಯನ್ನು ಸಾಕ್ಷಿಯು ನೋಡಿ ಗುರುತಿಸಿದ್ದು ನಿಶಾನೆ ಪಿ 2 (ಬಿ) ಎಂದು ಗುರುತಿಸಲಾಯಿತು. ಸಾಕ್ಷಿಯು ಮುಂದುವರೆದು ನಿಶಾನೆ ಪಿ 2 ರಲ್ಲಿ ಏನು ವಿಚಾರ ಬರೆದಿದೆ ಎಂದು ತನಗೆ ತಿಳಿದಿರುವುದಿಲ್ಲ ಎಂದು ನುಡಿಯುತ್ತಾರೆ. ಸಾಕ್ಷಿಯು ಒಂದು ಭಾವಚಿತ್ರವನ್ನು ನೋಡಿ ಗುರುತಿಸಿದ್ದು ಅದನ್ನು ಈಗಾಗಲೇ ನಿಪಿ 3 ಎಂದು ಗುರುತಿಸಲಾಗಿರುತ್ತದೆ. ಸಾಕ್ಷಿಯು ಮುಂದುವರೆದು ಸದರಿ ಭಾವಚಿತ್ರವನ್ನು ಯಾವ ಕಾರಣಕ್ಕಾಗಿ ಯಾರು ತೆಗೆದುಕೊಂಡರು ಎಂದು ನನಗೆ ತಿಳಿದಿರುವುದಿಲ್ಲ ಎಂದು ನುಡಿಯುತ್ತಾರೆ. ನಾನು ಆರೋಪಿತರೊಂದಿಗೆ ಶಾಮೀಲಾಗಿರುವುದರಿಂದ ನ್ಯಾಯಾಲಯದಲ್ಲಿ ಸುಳ್ಳು ಸಾಕ್ಷ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನಾನು ಆರೋಪಿತರನ್ನು ಈ ಹಿಂದೆ ನೋಡಿರುವುದಿಲ್ಲ.

(ಈ ಹಂತದಲ್ಲಿ ಎ.ಪಿ.ಪಿ. ಯವರು ಈ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲು ಮಾಡಲು ಅನುಮತಿ ಕೋರುತ್ತಾರೆ ಅಂತೆಯೇ ಪರಿಗಣಿಸಿ ಅನುಮತಿ ನೀಡಲಾಯಿತು)

**::ಪಾಟೀಸವಾಲು :: A.P.P ರವರಿಂದ ::**

1. ದಿಃ 12.11.2025 ರಂದು ಸಂಜೆ 6.00 ಗಂಟೆ ಸಮಯದಲ್ಲಿ ಗೌತಮ್ ಹೊಮ್ ಸ್ಟೇ ಬಳಿ ಎನ್ ಹೆಚ್ 169 ರಸ್ತೆಯಲ್ಲಿ ಒಂದು ದ್ವಿಚಕ್ರ ವಾಹನ ಸಂಖ್ಯೆ KA 18 EN

1123 ಬರುತ್ತಿರುವಾಗ ಆರೋಪಿತರು ಕಾರ್ ಸಂಖ್ಯೆ KA 18 MA 1406 ವಾಹನವನ್ನು ಅತೀ ವೇಗ ಮತ್ತು ಅಜಾಗರುಕತೆಯಿಂದ ಚಾಲನೆ ಮಾಡಿದ ಪರಿಣಾಮ ಚಾಸಾ 1 ರವರ ದ್ವಿಚಕ್ರ ವಾಹನಕ್ಕೆ ಡಿಕ್ಕಿ ಹೊಡೆದಿದ್ದು ಅದರ ಪರಿಣಾಮ ಹಿಂಬದಿ ಸವಾರಳಾಗಿದ್ದ ಮೃತ ವಿಜಯಲಕ್ಷ್ಮಿ ರವರ ತಲೆ ಡಿವೈಡರ್ ಗೆ ಬಿದ್ದಿದ್ದರಿಂದ ತಲೆಗೆ ತೀವ್ರ ಸ್ವರೂಪದ ಗಾಯವಾಗಿದ್ದು, ಚಿಕಿತ್ಸೆಗಾಗಿ ಶೃಂಗೇರಿ ಸರ್ಕಾರಿ ಆಸ್ಪತ್ರೆಗೆ ದಾಖಲು ಮಾಡುವ ಸಮಯಕ್ಕೆ ಅವರು ತೀರಿ ಹೋಗಿದ್ದಾರೆ ಎಂದು ವೈದ್ಯರು ತಿಳಿಸಿದ್ದಾರೆ ಎಂದರೆ ಸರಿಯಲ್ಲ. ಸದರಿ ಅಪಘಾತದ ಪರಿಣಾಮ ಚಾಸಾ 1 ರವರಿಗೂ ಸಾಮಾನ್ಯ ಸ್ವರೂಪದ ಗಾಯಗಳಾಗಿದ್ದವು ಎಂದರೆ ನನಗೆ ಗೊತ್ತಿಲ್ಲ. ದಿಃ 13.11.2025 ರಂದು ನನ್ನ ಮತ್ತು ಚಾಸಾ 3 ರವರ ಸಮಕ್ಷಮ ಚಾಸಾ 1 ರವರು ತೋರಿಸಿದಂತೆ ಅಪಘಾತ ವಾದ ಸ್ಥಳವನ್ನು ಪೋಲಿಸರು ಮದ್ಯಾಹ್ನ 12.45 ರಿಂದ 1.45 ರವರೆಗೂ ಸ್ಥಳದಲ್ಲಿಯೇ ನಿಪಿ 2 ರಂತೆ ದಾಖಲೆ ಮಾಡಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ನಾನು ನಿಪಿ 2 ರಲ್ಲಿರುವ ವಿಚಾರವನ್ನು ತಿಳಿದುಕೊಂಡು ಪಂಚ ಸಾಕ್ಷಿದಾರನಾಗಿ ನಿಪಿ 2 (ಬಿ) ರಂತೆ ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ದಿಃ 13.11.2025 ರಂದು ನಾನು ಪೋಲಿಸರಿಗೆ ನನ್ನ ಹೇಳಿಕೆಯನ್ನು ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿಗೆ ಸದರಿ ದಿಃ 13.11.2025 ರಂದು ಹೇಳಿಕೆಯ ಭಾಗಾಂಶ ವನ್ನು ಈ ಕೆಳಕಂಡಂತೆ ಓದಿ ಹೇಳಲಾಯಿತು.

"ನಾನು ದಿನಾಂಕಃ 12.11.2025 ರಂದು ........................................................ ನೀಡಿರುತ್ತೇನೆ." ಸದರಿ ಹೇಳಿಕೆಯ ಭಾಗಂಶವನ್ನು ಸಾಕ್ಷಿಯು ನಿರಾಕರಿಸಿರುತ್ತಾರೆ. ಸದರಿ ಹೇಳಿಕೆಯನ್ನು ನಿಪಿ 7 ಎಂದು ಗುರತಿಸಲಾಯಿತು.

**:: ಪಾಟೀ ಸವಾಲು :: ಆರೋಪಿ ಪರ ಶ್ರೀ. GH ವಕೀಲರಿಂದ ::ಇಲ್ಲ::**

**:: ಮರುವಿಚಾರಣೆ ಇಲ್ಲ ::**

(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಗಣಕ ಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸರಿ ಇದೆ.

ಸಹಿ/-

ಸಿ.ಜೆ. ಮತ್ತು ಜೆ.ಎಮ್.ಎಫ್.ಸಿ.,

ಶೃಂಗೇರಿ.

ಸಾಕ್ಷಿಯ ಸಹಿ::